**All India Radio: Bangalore**
**Regional Bulletin In Kannada**
**29.10.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಒಳಮೀಸಲಾತಿ ಜಾರಿಗೆ ಸುಪ್ರೀಂ ಕೋರ್ಟ್ ನಿರ್ದೇಶನ ಪಾಲಿಸಬೇಕು; ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ
2. ಮೈಸೂರಿನಲ್ಲಿ ರಂಗಸನ್ಸ್ ಏರೋಸ್ಪೇಸ್ ಕಂಪನಿಯ ನೂತನ ಘಟಕ; ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಲೋಕಾರ್ಪಣೆ
3. ಸಭಾಧ್ಯಕ್ಷರ ಕಚೇರಿಯಲ್ಲಿ ಅವ್ಯವಹಾರ ಆರೋಪ ; ಯಾವುದೇ ಚರ್ಚೆಗೆ ಸಿದ್ಧ - ಸ್ಪೀಕರ್ ಯು.ಟಿ.ಖಾದರ್
4. ಕೃಷಿ ಉತ್ಪನ್ನಗಳಿಗೆ ಅವಕವಾಗುವ ಮೂರು ತಿಂಗಳು ಮೊದಲು ಮಾರುಕಟ್ಟೆ ಕಲ್ಪಿಸಲು ಸಚಿವ ಶಿವಾನಂದ ಪಾಟೀಲ್ ಸಲಹೆ
5. ಬೆಂಗಳೂರು ಅಭಿವೃದ್ಧಿ ಬಗ್ಗೆ ಬಿಜೆಪಿಗೆ ಕಾಳಜಿ ಇಲ್ಲ - ಉಪಮುಖ್ಯಮಂತ್ರಿ, ಸುರಂಗ ರಸ್ತೆಗೆ ಸಂಸದ ತೇಜಸ್ವಿ ಸೂರ್ಯ ಆಕ್ಷೇಪ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ವಿಧಾನಸೌಧದಲ್ಲಿ ಪರಿಶಿಷ್ಟ ಜಾತಿ ಒಳಮೀಸಲಾತಿಯ ಅನುಷ್ಠಾನ ಕುರಿತಂತೆ ಇರುವ ಸಮಸ್ಯೆಗಳ ಬಗ್ಗೆ ಸಭೆ ನಡೆಯಿತು. ಸಭೆಯಲ್ಲಿ ಒಳಮೀಸಲಾತಿ ಕುರಿತಾಗಿ ಸಚಿವ ಸಂಪುಟ ಸಭೆಯ ತೀರ್ಮಾನಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಬೇಕು. ರೋಸ್ಟರ್ ಜಾರಿ ಕುರಿತಾಗಿ ಎಲ್ಲರ ಅಹವಾಲುಗಳನ್ನು ಆಲಿಸಬೇಕು. ಯಾವುದೇ ಜಾತಿಗಳಿಗೂ ರೋಸ್ಟರ್‌ನಲ್ಲಿ ಅನ್ಯಾಯವಾಗದಂತೆ ಖಾತ್ರಿಪಡಿಸಬೇಕು ಎಂದು ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ. ಒಳ ಮೀಸಲಾತಿ ಜಾರಿ ಕುರಿತಾಗಿ ಸುಪ್ರೀಂಕೋರ್ಟ್ ನಿರ್ದೇಶನಗಳ ಪ್ರಕಾರ ಕಾಯ್ದೆ ಜಾರಿಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಸಭೆಯಲ್ಲಿ ಸಚಿವರಾದ ಜಿ. ಪರಮೇಶ್ವರ್,

ಎಚ್.ಸಿ.ಮಹಾದೇವಪ್ಪ, ಕೆ.ಎಚ್.ಮುನಿಯಪ್ಪ, ಶಿವರಾಜ ತಂಗಡಗಿ, ಎಚ್.ಕೆ.ಪಾಟೀಲ್, ಪ್ರಿಯಾಂಕ ಖರ್ಗೆ, ಬಿ.ಆರ್.ತಿಮ್ಮಾಪುರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

<><><><>

ಪ್ರತಿಷ್ಠಿತ ಬೋಯಿಂಗ್ ಕಂಪನಿಯೊಂದಿಗೆ ಸಹಭಾಗಿತ್ವ ಸ್ಥಾಪಿಸಿಕೊಂಡಿರುವ ಮೈಸೂರಿನ ರಂಗಸನ್ಸ್ ಏರೋಸ್ಪೇಸ್ ಕಂಪನಿಯ ನೂತನ ಮತ್ತು ಅತ್ಯಾಧುನಿಕ ಘಟಕವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ್ ಉದ್ಘಾಟಿಸಿದರು. ಇದೇ ವೇಳೆ ಕಂಪನಿಯಿಂದ ಕೌಶಲ್ಯ ತರಬೇತಿ ಪಡೆದ ೬೦ ಐಟಿಐ ಪದವೀಧರರಿಗೆ ಅವರು ಪ್ರಮಾಣಪತ್ರ ವಿತರಿಸಿದರು. ಬಳಿಕ ಮಾತನಾಡಿದ ಅವರು, 'ಒಂದು ಕಾಲದಲ್ಲಿ ಅಗರಬತ್ತಿ ವ್ಯಾಪಾರ ಮಾಡುತ್ತಿದ್ದ ರಂಗಸನ್ಸ್ ಪರಿವಾರ ಈಗ ಏರೋಸ್ಪೇಸ್ ಕ್ಷೇತ್ರದಲ್ಲಿ ಛಾಪು ಮೂಡಿಸಿರುವುದು ಮೈಲಿಗಲ್ಲಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು. ವೈಮಾಂತರಿಕ್ಷ ಕ್ಷೇತ್ರದಲ್ಲಿ ಈ ಸಂಸ್ಥೆಗೆ ಬೇಕಾದ ಎಲ್ಲ ಸಹಕಾರವನ್ನೂ ಕೈಗಾರಿಕೆ ಇಲಾಖೆ ನೀಡಲಿದೆ. ನೂತನ ಘಟಕವು ವಿಸ್ತಾರ, ವಿನ್ಯಾಸ ಮತ್ತು ಮಹತ್ವಾಕಾಂಕ್ಷೆ ಮೂರರಲ್ಲೂ ಜಾಗತಿಕ ಮಟ್ಟದಲ್ಲಿರುವುದು ಖುಷಿಯ ಸಂಗತಿಯಾಗಿದೆ' ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿರುವ ಏರೋಸ್ಪೇಸ್ ಕಂಪನಿಗಳು ಜಾಗತಿಕ ಮಾರುಕಟ್ಟೆಯ ಬೇಡಿಕೆಗಳನ್ನು ಪೂರೈಸಲು ಸಮರ್ಥವಾಗಿವೆ ಎನ್ನುವುದಕ್ಕೆ ಇದಕ್ಕಿಂತ ನಿದರ್ಶನ ಬೇಕಿಲ್ಲ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

<><><><>

ರಾಜ್ಯ ವಿಧಾನಸಭೆ ದೇಶದಲ್ಲಿಯೇ ಸರ್ವರ ಮೆಚ್ಚುಗೆ ಪಡೆದಿದೆ. ಇಂತಹ ವಿಧಾನಸಭೆಯ ಅಧ್ಯಕ್ಷರ ಕಚೇರಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ಹೇಳಿಕೆಗಳು ಕೇವಲ ಅಸೂಯಿಂದ ಸೃಷ್ಟಿಯಾದವುಗಳು ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಸ್ಪಷ್ಟಪಡಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತಂತೆ ಸಕಾರಾತ್ಮಕ ಚರ್ಚೆಗೆ ಸಿದ್ಧವಿರುವುದಾಗಿ ಹೇಳಿದ್ದಾರೆ. ಯಾರೋ ಹೇಳಿದ ವಿಷಯಕ್ಕೆ ಉತ್ತರಿಸಲು ಆಗುವುದಿಲ್ಲ. ನಾನು ಸಂವಿಧಾನ ಬದ್ಧವಾದ ಸ್ಪೀಕರ್ ಸ್ಥಾನದಲ್ಲಿದ್ದು, ಈ ಸ್ಥಾನಕ್ಕೆ ಅದರದ್ದೇ ಆದ ಗೌರವವಿದೆ. ಯಾವುದೇ ದೂರುಗಳಿದ್ದಲ್ಲಿ ಲಿಖಿತವಾಗಿ ಸಲ್ಲಿಸಲಿ ಎಂದು ತಿಳಿಸಿದ್ದಾರೆ.

<><><><>

ಯಾವುದೇ ಕೃಷಿ ಉತ್ಪನ್ನ ಮಾರುಕಟ್ಟೆಗೆ ಆವಕವಾಗುವ ಮೂರು ತಿಂಗಳು ಮುಂಚಿತವಾಗಿ ಮಾರುಕಟ್ಟೆ ಕಲ್ಪಿಸಲು ಯೋಜನೆ ರೂಪಿಸಬೇಕು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಮೆಕ್ಕೆಜೋಳ, ಈರುಳ್ಳಿ ಬೆಲೆ ಕುಸಿತದ ಹಿನ್ನೆಲೆಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕೊಬ್ಬರಿ ಬೆಲೆ ಕುಸಿತದ ಸಂದರ್ಭದಲ್ಲಿ ತಕ್ಷಣ ಕನಿಷ್ಠ ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ಆರಂಭಿಸಿದ ಪರಿಣಾಮ ಮಾರುಕಟ್ಟೆಯಲ್ಲಿ ಕೊಬ್ಬರಿ ಬೆಲೆ ಕುಸಿತ ನಿಯಂತ್ರಿಸಲು ಸಾಧ್ಯವಾಯಿತು. ಹೀಗಾಗಿ ಕೃಷಿ ಉತ್ಪನ್ನಗಳ ಬೆಲೆ ಕುಸಿತದ ಸಂದರ್ಭದಲ್ಲಿ ತಕ್ಷಣ ಕ್ರಮ ಕೈಗೊಳ್ಳುವ ಬಗ್ಗೆ ಅಧಿಕಾರಿಗಳು ಗಮನಹರಿಸಬೇಕು ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ ನಿಗದಿಪಡಿಸಿದ ಕನಿಷ್ಟ ಬೆಂಬಲ ಬೆಲೆಯಲ್ಲಿ ಮೆಕ್ಕೆಜೋಳ ಖರೀದಿ ಮಾಡಿ ಎಂದು ಸಭೆಯಲ್ಲಿ ಭಾಗವಹಿಸಿದ್ದ ಕೆಎಂಎಫ್ ನಿರ್ದೇಶಕ ಶಿವಸ್ವಾಮಿ ಅವರಿಗೆ ಮನವಿ ಮಾಡಿದರು. ಈರುಳ್ಳಿ ಬೆಳೆಗಾರರನ್ನು ಬೆಲೆ ಕುಸಿತದಿಂದ ಪಾರು ಮಾಡಲು ಪಿಡಿಪಿಎಸ್ ಅಡಿಯಲ್ಲಿ ಖರೀದಿ ಮಾಡುವುದೇ ಈಗ ಇರುವ ಏಕೈಕ ಪರಿಹಾರ ಮಾರ್ಗವಾಗಿದ್ದು, ಕೇಂದ್ರದ ಅನುಮತಿ ಪಡೆಯಬೇಕು ಎಂದು ತಿಳಿಸಿದ್ದಾರೆ.

<><><><>

ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸ್ಪಷ್ಟಪಡಿಸಿದ್ದಾರೆ. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ರಾಜ್ಯವನ್ನು ಸಮರ್ಥವಾಗಿ ನಿಭಾಯಿಸಿಕೊಂಡು ಹೋಗುತ್ತಿದ್ದಾರೆ. ಹೀಗಾಗಿ ರಾಜ್ಯದಲ್ಲಿ ಯಾವ ಕ್ರಾಂತಿಯೂ ಇಲ್ಲ ಎಂದು ತಿಳಿಸಿದ ಅವರು, ಎಲ್ಲವೂ ಊಹಾಪೋಹದ ಸುದ್ದಿ ಎಂದು ಹೇಳಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ತಮ್ಮ ಹಕ್ಕು ಅಭಿಪ್ರಾಯ ಮಂಡಿಸಲು ಪ್ರತಿಯೊಬ್ಬರಿಗೂ ಹಕ್ಕಿದೆ. ಇದರ ನೆಲೆಗಟ್ಟಿನಲ್ಲಿ ಹೈಕಮಾಂಡ್ ಸಮರ್ಥ ನಿರ್ಧಾರ ಕೈಗೊಳ್ಳಲಿದೆ ಎಂದು ತಿಳಿಸಿದ್ದಾರೆ.

<><><><>

ಬಿಜೆಪಿ ನಾಯಕರಿಗೆ ಬೆಂಗಳೂರು ಅಬಿವೃದ್ಧಿ ಬಗ್ಗೆ ಕಾಳಜಿ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಅಭಿವೃದ್ಧಿಗೆ ಬಿಜೆಪಿ ಕೊಡುಗೆ ಏನು ಎಂದು ಪ್ರಶ್ನಿಸಿದ್ದಾರೆ. ಬಿಹಾರ ಚುನಾವಣೆಗೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ೩೦೦ ಕೋಟಿ ರೂಪಾಯಿ ನೀಡಿದ್ದಾರೆ

ಎಂಬ ಶಾಸಕ ಶ್ರೀರಾಮಲು ಹೇಳಿಕೆಗೆ ಪ್ರತಿಕ್ರಿಯಿಸಿ, ಶ್ರೀರಾಮುಲು ಅವರು, ಕಾಂಗ್ರೆಸ್ ಪಕ್ಷಕ್ಕೆ ನೀಡಿದ ಹಣವನ್ನು ಬಿಹಾರ ಚುನಾವಣೆಗೆ ಕಳುಹಿಸಲಾಗಿದೆ ಎಂದು ವ್ಯಂಗ್ಯವಾಡಿದ್ದಾರೆ. ಪರಿಷತ್ ಚುನಾವಣೆಗೆ ಸಚಿವರು, ಶಾಸಕರ ಅಭಿಪ್ರಾಯ ಪಡೆದು ಅಭ್ಯರ್ಥಿಗಳನ್ನು ಅಂತಿಮಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರಿನ ಸುರಂಗ ರಸ್ತೆಗೆ ೪೩ ಸಾವಿರ ಕೋಟಿ ರೂಪಾಯಿ ಖರ್ಚಾಗಲಿದ್ದು, ೧೮ ಕಿಲೋಮೀಟರ್ ಸುರಂಗ ಮಾರ್ಗ ರಚನೆಯಿಂದ ಬೆಂಗಳೂರಿನ ಟ್ರಾಫಿಕ್ ಸಮಸ್ಯೆ ಪರಿಹಾರ ಹೇಗೆ ಸಾಧ್ಯ ಎಂದು ಸಂಸದ ತೇಜಸ್ವಿ ಸೂರ್ಯ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರ್ವಜನಿಕರ ದುಡ್ಡು ಪೋಲು ಮಾಡುವುದಕ್ಕೆ ಇದಕ್ಕಿಂತ ನಿದರ್ಶನ ಇಲ್ಲ ಎಂದು ತಿಳಿಸಿದ್ದಾರೆ. ಬೆಂಗಳೂರಿನ ಶೇಕಡಾ ೭೦ರಷ್ಟು ಜನರು ಸಾರ್ವಜನಿಕ ಸಾರಿಗೆಯಲ್ಲಿ ಓಡಾಡುವಂತಾಗಬೇಕು ಎಂದು ಹೇಳಿದ್ದಾರೆ. ಮೆಟ್ರೋ ದರವನ್ನು ಆದಷ್ಟು ಬೇಗ ಇಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

<><><><>

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಅಲ್ಪಸಂಖ್ಯಾತ ಸಮುದಾಯಗಳಿಗೆ ಹೆಚ್ಚು ಅವಕಾಶಗಳು ದೊರೆಯುವ ಜೊತೆಗೆ ಶೈಕ್ಷಣಿಕ ಬೆಳವಣಿಗೆಗೂ ಅನುಕೂಲವಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ, ಹಾಗೂ ವಸತಿ ಖಾತೆ ಸಚಿವ ಜಮೀರ್ ಅಹ್ಮದ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್ಕಾರ ಅಲ್ಪಸಂಖ್ಯಾತ ಸಮುದಾಯಳಿಗೆ ಹೆಚ್ಚಿನ ಅವಕಾಶಗಳನ್ನು ನೀಡಿ ಶಿಕ್ಷಣಕ್ಕೂ ಆದ್ಯತೆಯ ಮೇಲೆ ಪ್ರೋತ್ಸಾಹ ನೀಡುತ್ತಿದೆ ಎಂದು ಹೇಳಿದ್ದಾರೆ.

<><><><>

ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು ೧೯೦ ಎಕರೆ ಪ್ರದೇಶದಲ್ಲಿ ಸ್ಥಾಪನೆಯಾಗುತ್ತಿದ್ದು, ಸುಮಾರು ೪೫೦ ರಿಂದ ೫೦೦ ಕೋಟಿ ವೆಚ್ಚದಲ್ಲಿ ವಿಸ್ತೃತ ಯೋಜನೆ ರೂಪಿಸಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದ್ದಾರೆ. ಕೋಲಾರದಲ್ಲಿ ಇಂದು ವಿಧಾನಸಭಾ ಕ್ಷೇತ್ರದ ಸರ್ಕಾರಿ ಮಹಿಳಾ ಕಾಲೇಜು, ಸರ್ಕಾರಿ ಕಾನೂನು ಕಾಲೇಜು ವಿವಿಧ ಕಟ್ಟಡ

ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ವಿಶ್ವವಿದ್ಯಾಲಯವನ್ನು ಅಭಿವೃದ್ಧಿಪಡಿಸಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಎಂದು ಹೇಳಿದ್ದಾರೆ.

**ಧ್ವನಿ- ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್**

<><><><>

ಬೌದ್ಧ ಧರ್ಮದ ತತ್ವ ಚಿಂತನೆಗಳ ಅಧ್ಯಯನಕ್ಕೆ ವಿಶೇಷ ಉತ್ತೇಜನ ನೀಡಲು ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಲಾಗುವುದೆಂದು ಕುಲಪತಿಗಳಾದ ಪ್ರೊ. ರಮೇಶ್.ಬಿ. ತಿಳಿಸಿದ್ದಾರೆ.

ಕಲ್ಬುರ್ಗಿಯ ಪಾಲಿ ಇನ್‌ಸ್ಟಿಟ್ಯೂಟ್ ಮತ್ತು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಪಾಲಿ-ಕನ್ನಡ ಶಬ್ದಕೋಶದ ನಾಲ್ಕನೆಯ ಸಂಪುಟದ ಬಿಡುಗಡೆ ಸಮಾರಂಭದಲ್ಲಿ ಅವರು ಈ ವಿಷಯ ಪ್ರಕಟಿಸಿದ್ದಾರೆ. ಕ್ರಿಸ್ತ ಪೂರ್ವ ೫ನೇ ಶತಮಾನದ ಕಾಲಘಟ್ಟದಲ್ಲಿ ಜನಬಳಕೆಯ ಭಾಷೆಯಾಗಿದ್ದ ಪಾಲಿ ಭಾಷೆ ಭಾರತೀಯ ಜ್ಞಾನ ಶಾಖೆಯ ಅತ್ಯಮೂಲ್ಯ ಆಗರವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಶೇಕಡ ನೂರರಷ್ಟು ಗುರಿ ಸಾಧಿಸಲು ಹಾಸನ ಜಿಲ್ಲಾಧಿಕಾರಿ ಲತಾ ಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಇಂದು ನಡೆದ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ವಿವಿಧ ಇಲಾಖೆಗಳು ಸಾಧಿಸಿರುವ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು ಯಾವುದೇ ಇಲಾಖೆಯಿಂದ ಅನುದಾನ ಪೂರ್ಣ ಪ್ರಮಾಣದಲ್ಲಿ ವೆಚ್ಚವಾಗದೆ ವಾಪಸ್ಸು ಹೋಗಬಾರದು ಈ ನಿಟ್ಟಿನಲ್ಲಿ ಅಧಿಕಾರಿಗಳು ನಿಗಾವಹಿಸಬೇಕು ಎಂದು ತಿಳಿಸಿದ್ದಾರೆ. ಪರಿಶಿಷ್ಟ ಜಾತಿ ರೈತರಿಗೆ ಹೆಚ್ಚಿನ ಪ್ರೋತ್ಸಾಹ ನೀಡಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಉತ್ತೇಜನ ನೀಡುವಂತೆ ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರಿಗೆ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>